ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

841 (839) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು 18/01/2007ರಂದೇ ಅಸ್ತಿತ್ವಕ್ಕೆ ಬಂದಿದ್ದರೂ ದಿನಾಂಕ : 05/02/2018 ರಂದು ಆದಾಯ ತೆರಿಗೆ ಇಲಾಖೆಯಿಂದ 413.08 ಕೋಟಿ ತೆರಿಗೆ ಬಾಕಿ ಇದೆ ಎಂಬ ನೋಟೀಸ್ ಬಂದ 6 ತಿಂಗಳ ಬಳಿಕ ದಿನಾಂಕ : 28/08/2018ರಂದು ಆದಾಯ ತೆರಿಗೆ ಕಾಯ್ದೆ ಕಲಂ 10(46) ಅಡಿಯಲ್ಲಿ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸಲು ಮಂಡಳಿಗೆ ಆದಾಯ ತೆರಿಗೆ ಕಲ್ಪನೆ ಇರಲ್ಲಿಲ್ಲ ಎಂಬುದಾಗಿ ಅಸಂಬದ್ಧ ಲಿಖಿತ ಉತ್ತರವನ್ನು ನೀಡಿದ್ದು ಈ ರೀತಿಯ ಕರ್ತವ್ಯ ನಿರ್ಲಕ್ಷ ವಹಿಸಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಆದಾಯ ತೆರಿಗೆ ಕಾಯ್ದೆಯ ಕಲಂ 12ರ ಅನ್ವಯ ದತ್ತಿ ಸಂಸ್ಥೆ ಎಂದು ನೋಂದಣಿ ಮಾಡಿದ ಬಳಿಕ ದತ್ತಿ ಸಂಸ್ಥೆಯು ಆದಾಯ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸದಿರಲು ಕಾರಣವೇನು; ದತ್ತಿ ಸಂಸ್ಥೆಗಳು ಆದಾಯ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸದಿದ್ದರೂ ವಿನಾಯಿತಿ ನೀಡಿದ ಉದಾಹರಣೆಗಳು ಇವೆಯೇ;

(ಇ) ಆದಾಯ ತೆರಿಗೆ ಕಾಯದೆಯನ್ವಯ 30 ದಿನಗಳ ಒಳಗಾಗಿ ಮೇಲ್ಮನವಿ ಸಲ್ಲಿಸಲು ವಿಫಲರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ವಿಳಂಬ ಮಾಡಿದ ಅಧಿಕಾರಿಯನ್ನು ಅಮಾನತ್ತುಗೊಳಿಸದಿರಲು ಕಾರಣವೇನು;

(ಈ) ಪೂರ್ಣ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲು ಕಾರಣರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?